# ಅವಧಿ ಮುಗಿದ ಗ್ರಾ.ಪಂ.ಗಳಿಗೆ 'ತಾತ್ಕಾಲಿಕ ಸಮಿತಿ' ರಚಿಸಲು ನಿರಾಕರಿಸಿದ ಹೈಕೋರ್ಟ್

Published on :14 hours ago




**ರಾಜ್ಯದಲ್ಲಿ ಆಡಳಿತಾವಧಿ ಮುಗಿದಿರುವ ಗ್ರಾಮ ಪಂಚಾಯಿತಿಗಳಿಗೆ 'ತಾತ್ಕಾಲಿಕ ಸಮಿತಿಗಳನ್ನು' ರಚಿಸಲು ನೀಡಿದ್ದ ರಾಜ್ಯ ಸರ್ಕಾರದ ಆದೇಶ ಪ್ರಶ್ನಿಸಿ, ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ ನೇತೃತ್ವದ ವಿಭಾಗೀಯ ಪೀಠ ಅರ್ಜಿದಾರರ ಕೋರಿಕೆ ಪುರಸ್ಕರಿಸಲು ನಿರಾಕರಿಸಿದೆ.**

**ಬೆಂಗಳೂರು:** ರಾಜ್ಯದಲ್ಲಿ ಆಡಳಿತಾವಧಿ ಮುಗಿದಿರುವ ಗ್ರಾಮ ಪಂಚಾಯಿತಿಗಳಿಗೆ 'ತಾತ್ಕಾಲಿಕ ಸಮಿತಿಗಳನ್ನು' ರಚಿಸಲು ಸರ್ಕಾರಕ್ಕೆ ನಿರ್ದೇಶಬೇಕು ಎಂದು ಕೋರಿದ್ದ ಅರ್ಜಿಯನ್ನು ಪರಿಗಣಿಸಲು ಹೈಕೋರ್ಟ್ ನಿರಾಕರಿಸಿದೆ.

ಅವಧಿ ಮುಗಿದಿರುವ ಗ್ರಾ. ಪಂ. ಗಳಿಗೆ ಆಡಳಿತಾಧಿಕಾರಿ ನೇಮಿಸಲು ಮುಂದಾಗಿರುವ ರಾಜ್ಯ ಸರ್ಕಾರದ ಆದೇಶ ಪ್ರಶ್ನಿಸಿದ್ದ ಮಂಡ್ಯದ ನಾಗಣ್ಣ ಮತ್ತಿತರರು ಪಂಚಾಯಿತಿಗಳಿಗೆ ತಾತ್ಕಾಲಿಕ ಸಮಿತಿ ರಚಿಸಲು ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿದರು. ಈ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ ನೇತೃತ್ವದ ವಿಭಾಗೀಯ ಪೀಠ ಅರ್ಜಿದಾರರ ಕೋರಿಕೆ ಪುರಸ್ಕರಿಸಲು ನಿರಾಕರಿಸಿದೆ.

ಪಂಚಾಯಿತಿಗಳ ಅವಧಿ ಮುಗಿದ ಮೇಲೆ ಅದನ್ನು ವಿಸ್ತರಿಸಲು ಅಥವಾ ಮುಂದುವರಿಸಲು ಕಾಯ್ದೆಯಲ್ಲಿ ಅವಕಾಶವಿಲ್ಲ. ಅಲ್ಲದೇ ಆಡಳಿತಾಧಿಕಾರಿಗಳ ಬದಲು ತಾತ್ಕಾಲಿಕ ಸಮಿತಿಗಳನ್ನು ರಚಿಸಲಿಕ್ಕೂ ಕಾಯ್ದೆಯಲ್ಲಿ ಅವಕಾಶವಿಲ್ಲ. ಹೀಗಾಗಿ, ತಾತ್ಕಾಲಿಕ ಸಮಿತಿಗಳನ್ನು ರಚಿಸಲು ಸರ್ಕಾರಕ್ಕೆ ನಿರ್ದೇಶಿಸಲು ಸಾಧ್ಯವಿಲ್ಲ. ಆದರೆ, ಆಡಳಿತಾಧಿಕಾರಿ ನೇಮಕದಿಂದ ಅನ್ಯಾಯಕ್ಕೊಳಗಾದಲ್ಲಿ ನ್ಯಾಯಾಲಯದ ಮೊರೆ ಹೋಗಬಹುದು. ಸಾರ್ವಜನಿಕ ಹಿತಾಸಕ್ತಿ ಅರ್ಜಿಯಡಿ ಸಮತಿ ರಚಿಸುವಂತೆ ನಿರ್ದೇಶಿಸಲು ಸಾಧ್ಯವಿಲ್ಲ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ಇದಕ್ಕೂ ಮುನ್ನ ಅರ್ಜಿದಾರರ ಪರ ವಕೀಲರು ವಾದಿಸಿ, ಅವಧಿ ಮುಗಿದ ಗ್ರಾ.ಪಂ.ಗಳಿಗೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡುವುದರಿಂದ ಪಂಚಾಯಿತಿಗಳು ಆಡಳಿತಾತ್ಮಕ ತೀರ್ಮಾನಗಳನ್ನು ಸ್ವತಂತ್ರವಾಗಿ ತೆಗೆದುಕೊಳ್ಳಲು ಸಾಧ್ಯವಿಲ್ಲ. ಇದರಿಂದಾಗಿ ಸಂವಿಧಾನದ ಆಶಯಗಳಿಗೆ ಹಿನ್ನಡೆ ಆಗಲಿದೆ. ಗ್ರಾಮ ಸಭೆಯ ಮಹತ್ವ ಕುಗ್ಗುತ್ತದೆ. ಕೊರೊನಾ ಪರಿಸ್ಥಿತಿಯಲ್ಲಿ ಆಡಳಿತಾಧಿಕಾರಿಗಳಿಗೆ ಅವರ ಮಾತೃ ಇಲಾಖೆ ನಿರ್ವಹಿಸುವುದೇ ಕಷ್ಟವಾಗಿದೆ. ಹೀಗಾಗಿ ಪಂಚಾಯ್ತಿಗಳ ಕಾರ್ಯನಿರ್ವಹಣೆಗೆ ಹಿಂದಿನ ಅವಧಿಯ ಸದಸ್ಯರನ್ನು ಒಳಗೊಂಡ ತಾತ್ಕಾಲಿಕ ಸಮಿತಿಗಳನ್ನು ರಚಿಸಲು ಸರ್ಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಕೋರಿದರು.